# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 540(626)
ಸದಸ್ಯರ ಹೆಸರು : ಶ್ರೀ ಕೆ. ವಿವೇಕಾನಂದ (ಶಿಕ್ಷಕರ ಕ್ಷೇತ್ರ)
ಉತ್ತರಿಸುವ ದಿನಾಂಕ : 09-03-2026
ಉತ್ತರಿಸುವ ಸಚಿವರು : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಪ್ರೌಢಶಾಲಾ ಸಹಶಿಕ್ಷಕರ ಹುದ್ದೆಯಿಂದ ಪದವಿ ಪೂರ್ವ ಕಾಲೇಜು ಉಪನ್ಯಾಸಕರ ಹುದ್ದೆಗೆ ಮುಂಬಡ್ತಿ ನೀಡಲು ಸರ್ಕಾರ ಜಾರಿಗೆ ತಂದಿರುವ ನಿಯಮಗಳು ಯಾವುವು; | ವೃಂದ ಮತ್ತು ನೇಮಕಾತಿ ನಿಯಮಗಳಿಗೆ ಸಂಬಂಧಿಸಿದ ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 35 ಡಿಜಿಓ 2009 ದಿನಾಂಕ:15-05-2014 ರಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ವೃಂದದಲ್ಲಿ ಶೇ:75 ರಷ್ಟು ಹುದ್ದೆಯನ್ನು ನೇರ ನೇಮಕಾತಿಗೆ ಮತ್ತು ಸರ್ಕಾರಿ ಪ್ರೌಢ ಶಾಲಾ ಸಹಶಿಕ್ಷಕರಿಗೆ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ಹುದ್ದೆಗೆ ಪದೋನ್ನತಿ ನೀಡಲು ಶೇ:25 ರಷ್ಟು ಹುದ್ದೆಗಳನ್ನು ನಿಗಧಿಪಡಿಸಲಾಗಿದೆ. ಹಾಗೂ ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 185 ಡಿಜಿಡಿ 2017(ಪಾರ್ಟ್-3) ದಿನಾಂಕ:15/10/2024 ರಲ್ಲಿ ಉಪನ್ಯಾಸಕರ ಹುದ್ದೆಗೆ ಸ್ನಾತಕೋತ್ತರ ಪದವಿಯಲ್ಲಿ ಶೇ.55 ರಿಂದ 50 ರಷ್ಟು ಅಂಕಗಳ ವಿದ್ಯಾರ್ಹತೆಯನ್ನು ಮತ್ತು ಬಿ.ಇಡಿ ಪದವಿಯನ್ನು ನಿಗದಿಪಡಿಸಲಾಗಿದೆ.<br><br>ಮುಂದುವರೆದು ಅರ್ಹರಿರುವ ಸಹಶಿಕ್ಷಕರುಗಳಿಗೆ ಉಪನ್ಯಾಸಕರ ಹುದ್ದೆಗೆ ಮುಂಬಡ್ತಿ ನೀಡಲು ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಅರ್ಹತಾ ಪರೀಕ್ಷೆಯನ್ನು ನಿಗದಿಪಡಿಸಲಾಗಿದೆ. ಸದರಿ ಪರೀಕ್ಷೆಯನ್ನು ನಡೆಸುವ ಕಾರ್ಯವನ್ನು ಶಾಲಾ ಶಿಕ್ಷಣ ಇಲಾಖೆಯ, ಕೇಂದ್ರೀಕೃತ ದಾಖಲಾತಿ ಘಟಕ, ಬೆಂಗಳೂರು, ಇವರಿಗೆ ವಹಿಸಲಾಗಿದ್ದು, ಸದರಿ ಅರ್ಹತಾ ಪರೀಕ್ಷೆಯು ದಿನಾಂಕ: 21/04/2026ರಂದು ನಡೆಸಲು ನಿಗಧಿಪಡಿಸಲಾಗಿದೆ. |
| ಆ) | ಸರ್ಕಾರ ಪ್ರೌಢಶಾಲಾ ಸಹಶಿಕ್ಷಕರ ಹುದ್ದೆಯಿಂದ ಪದವಿ ಪೂರ್ವ ಕಾಲೇಜು ಉಪನ್ಯಾಸಕರ ಹುದ್ದೆಗೆ ಮುಂಬಡ್ತಿ ನೀಡಲು ಈ ಸಹ ಶಿಕ್ಷಕರಿಗೆ ಅರ್ಹತೆ ಪರೀಕ್ಷೆಯನ್ನು ನಡೆಸಿ ಇದರ ಮುಖಾಂತರ ಮುಂಬಡ್ತಿ ನೀಡಲು ನಡೆಸುತ್ತಿರುವ ಪ್ರಕ್ರಿಯೆಗಳು ಅವೈಜ್ಞಾನಿಕವಾಗಿರುವುದರಿಂದ ಸಹಶಿಕ್ಷಕರಿಗೆ ಬಹಳ ತೊಂದರೆಯಾಗುತ್ತಿದ್ದು ಇದನ್ನು ತಡೆಗಟ್ಟಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ; | ಪ್ರೌಢಶಾಲಾ ಸಹಶಿಕ್ಷಕರ ಹುದ್ದೆಯಿಂದ ಪದವಿ ಪೂರ್ವ ಕಾಲೇಜು ಉಪನ್ಯಾಸಕರ ಹುದ್ದೆಗೆ ಮುಂಬಡ್ತಿ ನೀಡಲು, ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 35 ಡಿಜಿಓ 2009 ದಿನಾಂಕ:15-05-2014ರ ಪದವಿ ಪೂರ್ವ ಶಿಕ್ಷಣ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಕ್ರಮ ಕೈಗೊಳ್ಳಲಾಗುತ್ತಿದೆ. ಅದರಂತೆ ಅರ್ಹತಾ ಪರೀಕ್ಷೆಯನ್ನು ನಡೆಸಲಾಗುತ್ತಿದೆ. |
| ಇ) | ಈ ಪ್ರೌಢಶಾಲಾ ಸಹ ಶಿಕ್ಷಕರಿಗೆ ಮುಂಬಡ್ತಿ ನೀಡಲು ಅರ್ಹತಾ ಪರೀಕ್ಷೆಯನ್ನು ನಡೆಸುತ್ತಿರುವುದರಿಂದ ಈ ಪರೀಕ್ಷೆಗೆ ಸಹ | |

| | | |
|---|---|---|
| | ಶಿಕ್ಷಕರು ತಯಾರಿ ಮಾಡಿಕೊಳ್ಳಬೇಕಾಗಿರುವುದರಿಂದ ಶಾಲಾ ವಿದ್ಯಾರ್ಥಿಗಳಿಗೆ ಪಾಠ ಪ್ರವಚನ ಮಾಡಲು ತುಂಬಾ ಅನಾನುಕೂಲವಾಗುತ್ತದೆ; ಈ ನಿಟ್ಟಿನಲ್ಲಿ ಹಿಂದೆ ಇದ್ದಂತೆ ನಿಯಗಳ ಪ್ರಕಾರ ಜೇಷ್ಠತೆ ಆಧಾರದ ಮೇರೆಗೆ ಈ ಪ್ರೌಢಶಾಲಾ ಸಹ ಶಿಕ್ಷಕರಿಗೆ ಮುಂಬಡ್ತಿ ನೀಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು: | |

**ಸಂಖ್ಯೆ:** ಇಪಿ 69 ಡಿಜಿಡಬ್ಲ್ಯೂ 2026

(ಎಸ್. ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು